ಉ) ಕಳೆದ ಮೂರು ವರ್ಷಗಳಲ್ಲಿ ಉದ್ಯೋಗಾವಕಾಶವನ್ನು ಪಡೆದಿರುವ ಅಭ್ಯರ್ಥಿಗಳ ಸಂಖ್ಯೆ :

2006–07	–	5984
2007–08	–	5282
2008–09	–	0099*

*ಅಂಗವಿಕಲರಿಗೆ ವಿಶೇಷ ನೇಮಕಾತಿ

789 ಶ್ರೀ ಬೆಳ್ಳುಬ್ಬಿ ಸಂಗಪ್ಪ ಕಲ್ಲಪ್ಪ (ಬಸವನಬಾಗೇವಾಡಿ) : ಮಾನ್ಯ ಪಶುಸಂಗೋಪನಾ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಬಿಜಾಪೂರ ಜಿಲ್ಲೆ, ಬಸವನಬಾಗೇವಾಡಿ ಮತಕ್ಷೇತ್ರದಲ್ಲಿ ಪಶು ಆಸ್ಪತ್ರೆಗಳನ್ನು ಸ್ಥಾಪಿಸುವುದು ಅತ್ಯವಶ್ಯಕತೆ ಬಗ್ಗೆ ಹಾಗೂ ಈಗಿರುವ ತಾಲ್ಲೂಕು ಪಶು ಚಿಕಿತ್ಸಾ ಸಂಚಾರ ವಾಹನದಲ್ಲಿನ ಸಿಬ್ಬಂದಿ ಕೊರತೆ ಹಾಗೂ ಅತ್ಯವಶ್ಯಕವಾಗಿರುವ ಸಿಬ್ಬಂದಿಗಳ ಕೊರತೆ ಇರುವ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ, ಸರ್ಕಾರ ಕೈಗೊಳ್ಳುವ ಕ್ರಮವೇನು?

ಶ್ರೀ ರೇವೂನಾಯಕ್ ಬೆಳಮಗಿ (ಪಶುಸಂಗೋಪನಾ ಸಚಿವರು) :

ಅ) ರಾಷ್ಟ್ರೀಯ ಕೃಷಿ ಆಯೋಗದ ಶಿಫಾರಸ್ಸಿನಂತೆ ಪ್ರತಿ 5000 ಜಾನುವಾರು ಘಟಕಗಳಿಂದ ಒಂದು ಪಶುವೈದ್ಯ ಸಂಸ್ಥೆ ಇರಬೇಕಾಗುತ್ತದೆ. ಬಿಜಾಪುರ ಜಿಲ್ಲೆ, ಬಸವನಬಾಗೇವಾಡಿ ತಾಲ್ಲೂಕಿನಲ್ಲಿ 2003ರ ಜಾನುವಾರು ಗಣತಿಯಂತೆ 75150 ಜಾನುವಾರು ಘಟಕಗಳಿದ್ದು, ಅದರಂತೆ ಬಸವನ ಬಾಗೇವಾಡಿ ತಾಲ್ಲೂಕಿನಲ್ಲಿ 15 ಪಶುವೈದ್ಯಕೀಯ ಸಂಸ್ಥೆಗಳ ಅಗತ್ಯವಿರುತ್ತದೆ. ಆದರೆ ಹಾಲಿ 22 ಪಶುವೈದ್ಯಕೀಯ ಸಂಸ್ಥೆಗಳಿದ್ದು, 7 ಸಂಸ್ಥೆಗಳು ಹೆಚ್ಚುವರಿಯಾಗಿರುತ್ತದೆ. ಆದುದರಿಂದ ಸದರಿ ಜಿಲ್ಲೆಯ ಬಸವನ ಬಾಗೇವಾಡಿಯಲ್ಲಿ ನೂತನವಾಗಿ ಪಶುವೈದ್ಯಕೀಯ ಆಸ್ಪತ್ರೆ ತೆರೆಯುವ ಅವಶ್ಯಕತೆವಿರುವುದಿಲ್ಲ. ಬಸವನ ಬಾಗೇವಾಡಿ ಸಂಚಾರಿ ಪಶುಚಿಕಿತ್ಸಾಲಯಕ್ಕೆ ಸಿಬ್ಬಂದಿಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿಲ್ಲ.

ಆ) ಈ ಬಗ್ಗೆ ಪರಿಶೀಲಿಸಿ ನಿಯಮಾನುಸಾರ ಅಗತ್ಯ ಕ್ರಮ ಕೈಗೊಳ್ಳಲಾಗುವುದು.

789 Sri Bellubbi Sangappa Kallappa (Basavana-bagewadi) : Hon'ble Minister for Animal Husbandry kindly answer to the below question?

a) Whether shortage of Veterinary Hospital at Basavanabagevadi constituency of Bijapur District, staff at the exisiting Mobile Veterinary Dispensary, has it come to the notice of the Government;

b) If so, what action has been taken by the Government?

Sri Revunaik Belamagi (Minister for Animal Husbandry):

a) As per 2003 Cattle Census, there are 75150 Cattle Hnits in Basavanabagevadi Taluk. As per the recommendation of National Commission on Agriculture, there should be one veterinary institution for every 5000 Cattle Units. Accordingly Basavana bagevadi Taluk requires 15 Veterinary Institutions but has got 22 Veterinary Institution, which is excess by 7 Institutions. Hence, there is no need to open new Veterinary Institution in that constituency. The scarcity of staff in Mobile Veterinary Dispensary at Basavanabagewadi taluk has not come to the notice of Government.

b) This will be examined and take necessary action as per rules.

1151 ಶ್ರೀ ಬಚ್ಚೇಗೌಡ ಕೆ.ಪಿ. : ಮಾನ್ಯ ಪಶುಸಂಗೋಪನಾ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿರುವ ಸರ್ಕಾರಿ ಪಶುಸಂಗೋಪನಾ ಕಾಲೇಜುಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು);

ಆ) ಈ ಕಾಲೇಜುಗಳನ್ನು ಯಾವ ಯಾವ ವರ್ಷ ಮಂಜೂರು ಮಾಡಲಾಗಿದೆ ಹಾಗೂ ಕಳೆದ ಮೂರು ವರ್ಷಗಳಿಂದ ಮಂಜೂರಾದ ಸರ್ಕಾರಿ ಕಾಲೇಜುಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು);

ಇ) ಸರ್ಕಾರಿ ಪಶುಸಂಗೋಪನಾ ಕಾಲೇಜುಗಳಲ್ಲಿ ವ್ಯಾಸಂಗ ಮಾಡಲು ಅವಕಾಶವಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು; (ಕಾಲೇಜುವಾರು ಮಾಹಿತಿ ನೀಡುವುದು);

ಈ) ಈಗಿರುವ ವಿದ್ಯಾರ್ಥಿಗಳ ಸಂಖ್ಯೆಗೆ ಅನುಗುಣವಾಗಿ ಉಪನ್ಯಾಸಕರು ಕಾರ್ಯ ನಿರ್ವಹಿಸುತ್ತಿದ್ದಾರೆಯೇ; ಹಾಗಿಲ್ಲದಿದ್ದಲ್ಲಿ ಕಾರಣಗಳೇನು;